**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1053/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಮಹೇಶ | ಪ್ರಾ.ಸಾಃ 2 |
| ತಂದೆಯ ಹೆಸರು | | ನಂಜಪ್ಪ | ಚಾಸಾಃ 2 |
| ವಯಸ್ಸು | | 30 | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಹುಲ್ಲಹಳ್ಳಿ | ದಿಃ 24.07.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಮಹಜರಿನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಇದನ್ನು ನಿಪಿ-2 ಎಂದು ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸುಮಾರು 7 ವರ್ಷಗಳ ಹಿಂದೆ ನಾನು ಪೊಲೀಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ನಿಪಿ 2 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ 2 ರಲ್ಲಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

( ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು )

**ಪಾಟೀ ಸವಾಲುಃ ಶ್ರೀ ಎಪಿಪಿ ಯವರಿಂದಃ**

2. ದಿನಾಂಕ 04.10.2017 ರಂದು ಕೃತ್ಯ ನಡೆದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಆರೋಪಿತನಿಂದ ಪ್ಲಾಸ್ಟಿಕ್ ಚೀಲದಲ್ಲಿದ್ದ 180 ಎಂ.ಎಲ್. ನ 18 ಮದ್ಯದ ಪೌಚುಗಳನ್ನು ರಾತ್ರಿ 7.45 ರಿಂದ 8.30 ರವರೆಗೆ ಮಹಜರಿನ ಪ್ರಕ್ರಿಯೆಯನ್ನು ಜರುಗಿಸುವ ಮೂಲಕ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ನಾನು ಪೊಲೀಸರಿಗೆ ಹೇಳಿಕೆಯನ್ನು

ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಸಲುವಾಗಿ ಎಲ್ಲಾ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಶ್ರೀ ವಕೀಲರಿಂದ ಆರೋಪಿ ಪರವಾಗಿ: ಏನು ಇಲ್ಲಾ**

ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**ಪ್ರಧಾನ ಸಿ.ಜೆ ಮತ್ತು ಪ್ರದನ್ಯಾದಂ,**

**ನಂಜನಗೂಡು**